3 ● RF(A)/100/3321

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]

Total No. of Printed Pages : 12 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 38 ]

Total No. of Questions : 38 ]

**ಸಂಕೇತ ಸಂಖ್ಯೆ : 33-K**

**Code No. : 33-K**

**A**

**CCE RF**

**UNREVISED**

**FULL SYLLABUS**

**Question Paper Serial No. 100**

ಇಲ್ಲಿಂದ ಕತ್ತರಿಸಿ

# ವಿಷಯ : ದ್ವಿತೀಯ ಭಾಷೆ — ಕನ್ನಡ

# Subject : Second Language — KANNADA

**(ಶಾಲಾ ಅಭ್ಯರ್ಥಿ / Regular Fresh)**

ದಿನಾಂಕ : 06. 04. 2023 ] [ Date : 06. 04. 2023

ಸಮಯ : ಬೆಳಗ್ಗೆ 10-30 ರಿಂದ ಮಧ್ಯಾಹ್ನ 1-30 ರವರೆಗೆ ] [ Time : 10-30 A.M. to 1-30 P.M.

ಗರಿಷ್ಠ ಅಂಕಗಳು : 80 ] [ Max. Marks : 80

**TEAR HERE TO OPEN THE QUESTION PAPER**

**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

## *ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :*

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

**Tear here**

[ Turn over

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ : 4 × 1 = 4**

1. ಲೋಪ ಸಂಧಿಗೆ ಉದಾಹರಣೆಯಾಗಿರುವ ಪದ

   (ಎ) ಮಾತಿಲ್ಲ

   (ಬಿ) ಮಳೆಗಾಲ

   (ಸಿ) ಗುರುವನ್ನು

   (ಡಿ) ದೇವಾಲಯ

2. ಜೋಡುನುಡಿಗೆ ಉದಾಹರಣೆಯಾಗಿರುವ ಪದ

   (ಎ) ಕೈಕೊಡು

   (ಬಿ) ಬನ್ನಿಬನ್ನಿ

   (ಸಿ) ಕತ್ತಿಮಸೆ

   (ಡಿ) ಸಿಹಿಕಹಿ

3. ತೃತೀಯಾ ವಿಭಕ್ತಿ ಪ್ರತ್ಯಯವಿದು

(ಎ) ಅನ್ನು

(ಬಿ) ಅಲ್ಲಿ

(ಸಿ) ಇಂದ

(ಡಿ) ಅ

4. ಇವುಗಳಲ್ಲಿ ಭೂತಕಾಲವನ್ನು ಸೂಚಿಸುವ ಪದ

(ಎ) ನೋಡುವನು

(ಬಿ) ನೋಡಿದನು

(ಸಿ) ನೋಡುತ್ತಾನೆ

(ಡಿ) ನೋಡುವಳು

**II. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 12 × 1 = 12**

5. ವಿಷದ ಬಾಣವು ಮರಕ್ಕೆ ತಗುಲಿದ್ದರಿಂದಾದ ಪರಿಣಾಮವೇನು ?

6. ಈ ನಾಡಿನ ಬೆನ್ನೆಲುಬು ಯಾರು ?

7. ಅಸಿ–ಮಸಿ ಎಂದರೇನು ?

8. ಸಸ್ತನಿಗಳ ಆಶ್ರಯದಾಣಗಳು ಯಾವುವು ?

9. ಹೆಡ್ ಮಾಸ್ತರರು ಸಂತೋಷಗೊಂಡುದು ಏಕೆ ?

10. ಲಂಡನ್‌ನಲ್ಲಿರುವ ವ್ಯಾಕ್ಸ್ ಮ್ಯೂಸಿಯಂಗೆ ಟುಸ್ಸೋಡ್ ಎಂಬ ಹೆಸರು ಹೇಗೆ ಬಂತು ?

11. ಗೋಪಾಲನಿಗೆ ಬಣ್ಣ ಬಣ್ಣದ ಹೂಗಳು ಹೇಗೆ ಕಾಣಿಸುತ್ತಿದ್ದವು ?

12. ಏಣಿ ಜನರಿಗೆ ಮಾಡಿದ ಉಪಕಾರವೇನು ?

13. ಸಿದ್ಧಾರ್ಥ ಬುದ್ಧನಾದ ಪರಿಯನ್ನು ಕವಿ ಬಸವರಾಜ ಸಬರದ ಅವರು ಎಂತಹ ಕಥೆಯೆಂದು ಬಣ್ಣಿಸಿದ್ದಾರೆ ?

14. ಚೈತ್ರದಲ್ಲಿ ಯಾವುದರ ವಾಲಗ ನಡೆದಿರುತ್ತದೆ ?

15. ಜನಪದರು ತುಂಬಿದ ಕುಣಿಗಲ್ ಕೆರೆಯನ್ನು ಯಾವುದಕ್ಕೆ ಹೋಲಿಸಿದ್ದಾರೆ ?

16. ಸೊನ್ನಲಿಗೆ ಸಿದ್ಧರಾಮರ ಪ್ರಕಾರ ಕೆರೆಗಳು ಯಾವಾಗ ನಿಷ್ಪ್ರಯೋಜಕವಾಗುತ್ತವೆ ?

**III. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 8 × 2 = 16**

17. ನಮ್ಮ ದೇಶದ ರಕ್ಷಣಾಪಡೆ ಏಕೆ ಪ್ರಬಲವಾಗಿರಬೇಕು ಎಂಬುದನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

18. ಹಕ್ಕಿಗಳು ಗೂಡನ್ನು ನಿರ್ಮಿಸುವ ಉದ್ದೇಶ ಕುರಿತು ನಿಮ್ಮ ಮಾತುಗಳಲ್ಲಿ ಬರೆಯಿರಿ.

19. ಲಂಡನ್‌ನಲ್ಲಿ ಸಂಭವಿಸಿದ ದುರಂತಗಳ ಬಗ್ಗೆ ಗೈಡ್ ತಿಳಿಸಿದ ವಿಚಾರಗಳೇನು ?

20. ಏಣಿ ಹೇಳಿಕೊಳ್ಳುವ ಕಷ್ಟಗಳೇನು ?

21. ಕುಣಿಗಲ್ ಕೆರೆ ನೋಡುವವರಿಗೆ ಹೇಗೆ ಕಾಣುತ್ತಿತ್ತು ?

22. 'ರೂಪಿದ್ದು ಫಲವೇನು ಗುಣವಿಲ್ಲದನ್ನಕ್ಕ' – ಈ ಮಾತಿನ ಅರ್ಥವೈಶಿಷ್ಟ್ಯವೇನು ?

23. ಹಾವನ್ನು ಕಂಡ ವೈದ್ಯರ ತಲೆಯಲ್ಲಿ ಯಾವ ವಿಚಾರಗಳು ಮೂಡಿಬಂದವು ?

24. ಹೊಳೆಯ ದಂಡೆಯ ಸಾಲಿನಲ್ಲಿ ಹಿಂದಿನ ಯಾವ ನೆನಪುಗಳಿವೆ ?

**IV. ಕೆಳಗಿನ ಕವಿ / ಸಾಹಿತಿಯ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : 1 × 3 = 3**

25. ಕುವೆಂಪು

**V. ಕೆಳಗಿನ ಪದ್ಯದ ಸಾರಾಂಶವನ್ನು ವಾಕ್ಯರೂಪದಲ್ಲಿ ಬರೆಯಿರಿ : 1 × 3 = 3**

26. ಮರವ ಅಪ್ಪಿದಂತ ಬಳ್ಳಿ ಹೂವ ಮುಡಿದು ನಕ್ಕಿತು
ಹಕ್ಕಿಯೊಂದು ತನ್ನ ಮರಿಗೆ ಗುಟುಕು ಕೊಟ್ಟು ಹಾರಿತು ।
ಹುತ್ತಿನಿಂದ ಇರುವೆ ಗುಂಪು ಸಾಲುಗಟ್ಟಿ ನಡೆಯಿತು
ಬೆಳ್ಳಕ್ಕಿ ಹಿಂಡುಗಟ್ಟಿ ಬಾನಿಗೇಣಿ ಹಾಕಿತು

**VI. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ : 1 × 3 = 3**

27. "ಬಾಳೆಯ ಹಣ್ಣಿನಂತೆ ಬಾಗಿದ ಕುಣಿಗಲು ಕೆರೆ"

**VII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ : 1 × 3 = 3**

28. “ಕುಂಬಾರನಿಗೆ ವರುಷ, ದೊಣ್ಣೆಗೆ ನಿಮಿಷ.”

**ಅಥವಾ**

“ಆಳಾಗಿ ದುಡಿ, ಅರಸನಾಗಿ ಉಣ್ಣು.”

**VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 5 × 3 = 15**

29. “ಏನಾದರೂ ವರವನ್ನು ಕೇಳು ಕೊಡುತ್ತೇನೆ.”

30. “ಕಪ್ಪುಗಳ ಚಿಂತೆ ಬೇಡ, ಕಾಫೀ ಆಸ್ವಾದಿಸಿ.”

31. “ಎಲ್ಲರೆದೆಗಳ ತುಂಬ ಸವಿಚೈತ್ರವು.”

32. “ತಟ್ಟೆಯೊಳು ಕರ್ಪೂರ ಮೌನದಲಿ ಕರಗುವೊಲು.”

33. “ನಿಟ್ಟೋಟದಲಿ ಹಾಯ್ದನು ಬಿಟ್ಟ ಮಂಡೆಯಲಿ.”

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : 1 × 4 = 4**

34. ಕೆಸರೊಳಿದ್ದರು ..................................................

..................................................................

..................................................................

................................................... ಸಾರ್ಥಕತೆಗೆ.

**ಅಥವಾ**

ಒಂದು ಬಾಣಕೆ ................................................

..................................................................

..................................................................

.................................... ಹೋರಾಡು ಹಗಲಿರುಳು.

**X. ಕೆಳಗಿನ ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 1 × 4 = 4**

35. ಬಾಲಕ ಪುಟ್ಟಯ್ಯ ಹಾರ್ಮೋನಿಯಂ ನುಡಿಸಿದ ಪ್ರಸಂಗವನ್ನು ಸ್ವಾರಸ್ಯಕರವಾಗಿ ಬರೆಯಿರಿ.

**ಅಥವಾ**

ಪುಟ್ಟಯ್ಯ ಸಮಾಜಕ್ಕೆ ಮುಡುಪಾದ ಪ್ರಸಂಗವನ್ನು ನೀವು ಮೆಚ್ಚುವ ಅಂಶಗಳೊಂದಿಗೆ ವಿವರಿಸಿ.

**XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :**

**1 × 4 = 4 ( 2 + 2 )**

36. ಸಮುದ್ರಕ್ಕೆ ಸಮೀಪವಾಗಿ ಸಂಪದ್ಭರಿತವಾಗಿರುವ ಈ ಪಶ್ಚಿಮ ಘಟ್ಟದ ಸಾಲು ಇತಿಹಾಸಕಾಲದಿಂದಲೂ ವಿದೇಶಿಯರ ಗಮನಸೆಳೆದಿತ್ತು. ನಾಲ್ಕು ಸಾವಿರ ವರ್ಷಗಳಿಂದಲೂ ತನ್ನ ಗೊಬ್ಬರದಿಂದಲೇ ತಾವು ಪುಷ್ಟಿಯಾಗುತ್ತ, ನಿರಾತಂಕವಾಗಿ ಬೆಳೆಯುತ್ತಿದ್ದ, ಈ ಅಡವಿಗಳಲ್ಲಿ ಅನೇಕ ಬಗೆಯ ವಿಶಿಷ್ಟ ಮಸಾಲೆ ಪರಿಮಳ ಸಸ್ಯಗಳೂ, ಔಷಧಿಯ ಮೂಲಿಕೆಗಳೂ ವಿಕಾಸವಾಗಿದ್ದು, ದೂರದ ಪರ್ಷಿಯಾದಿಂದ ಹಿಡಿದು ಪೋರ್ಚುಗಲ್‌ವರೆಗಿನ ವ್ಯಾಪಾರಿಗಳನ್ನು ಆಕರ್ಷಿಸಿತ್ತು. ಆನಂತರ ಬ್ರಿಟೀಷರು ಬಂದರು.

ಆವರೆಗೂ ನಾಗರಿಕತೆ ಸೋಂಕಿರದ ಈ ಕಾಡುಗಳಲ್ಲಿ ಮನುಷ್ಯನೂ ಅರಣ್ಯದ ಅವಿಭಾಜ್ಯ ಅಂಗವಾಗಿಯೇ ಇದ್ದ. ತನಗೆ ಬೇಕಿದ್ದಷ್ಟನ್ನೇ ಬಳಸಿಕೊಂಡು, ಒಂದು ಕಿತ್ತರೆ ಇನ್ನೊಂದನ್ನು ನೆಡುತ್ತಾ, ತನ್ನಷ್ಟಕ್ಕೆ ತಾನಿರುತ್ತಿದ್ದ.

ಪಶ್ಚಿಮ ಘಟ್ಟಗಳ ನಿಜವಾದ ಪತನ ಪ್ರಾರಂಭವಾದದ್ದು ಸ್ವಾತಂತ್ರ್ಯ ಬಂದ ಮೇಲೆ. ಒಂದು ಕಡೆ ಏರುತ್ತಿರುವ ಜನಸಂಖ್ಯೆಯಿಂದಾಗಿ ಕೃಷಿಭೂಮಿಯ ವಿಸ್ತರಣೆಗೆಂದು ರೈತರು ಅರಣ್ಯ ಕಡಿದು ಅತಿಕ್ರಮ ಸಾಗುವಳಿ ಆರಂಭಿಸಿದ್ದು, ಇನ್ನೊಂದು ಕಡೆ ಅರಣ್ಯ

ಹುಟ್ಟುವಳಿಗಳಾದ ಮೆಣಸು, ದಾಲಚಿನ್ನಿ, ಜೇನು, ಬೆತ್ತ, ಧೂಪ, ದಂತ, ರಾಳ, ಬಗಿನೆ, ಬಿದಿರುಗಳಿಗೆ ಬೇಡಿಕೆ ಹೆಚ್ಚಾಗಿದ್ದರಿಂದ ಹಣದಾಸೆಗೆ ಕಾಡು ದೋಚುವವರ ಸಂಖ್ಯೆ ಹೆಚ್ಚಾಯಿತು. ಕೊಡಲಿ, ಗುದ್ದಲಿ, ಸಿಡಿಮದ್ದುಗಳಿಂದ ಪಶ್ಚಿಮ ಘಟ್ಟಗಳು ತತ್ತರಿಸುತ್ತಿವೆ. ನೋಡನೋಡುತ್ತ ನಿರ್ನಾಮವಾಗುತ್ತಿವೆ.

*ಪ್ರಶ್ನೆಗಳು :*

ಅ) ಪಶ್ಚಿಮ ಘಟ್ಟಗಳ ಪತನಕ್ಕೆ ಕಾರಣಗಳೇನು ?

ಆ) ಪಶ್ಚಿಮ ಘಟ್ಟಗಳು ವಿದೇಶಿಯರ ಗಮನ ಸೆಳೆದಿದ್ದು ಹೇಗೆ ?

**XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧ ಬರೆಯಿರಿ : 1 × 4 = 4**

37. ಕ್ರೀಡೆಗಳ ಮಹತ್ವ.

**ಅಥವಾ**

ದೂರದರ್ಶನದ ಪ್ರಯೋಜನಗಳು.

**XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

38. ನಿಮ್ಮನ್ನು ಕಾರವಾರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ 'ಅಶ್ವಿನಿ' ಎಂದು ಭಾವಿಸಿಕೊಂಡು, ಕನ್ನಡ 'ಶಬ್ದಕೋಶ' ಕಳುಹಿಸಿಕೊಡುವಂತೆ ಕೋರಿ, ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಿಗೆ ಒಂದು ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಶಿವಮೊಗ್ಗದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ನಾಗರಾಜ' ಎಂದು ಭಾವಿಸಿಕೊಂಡು, ನಿಮ್ಮ ಶಾಲಾ ಪ್ರವಾಸದ ಅನುಭವಗಳನ್ನು ತಿಳಿಸಿ, ಉಡುಪಿಯ ವಿದ್ಯಾನಗರ ನಿವಾಸಿಯಾದ 'ನಿರಂಜನ' ಎಂಬ ಹೆಸರಿನ ಗೆಳೆಯನಿಗೆ ಪತ್ರವನ್ನು ಬರೆಯಿರಿ.